# <u>ಜಿಲ್ಲಾ ಪಂಚಾಯತ್, ಹಾಸನ.</u>

ಸಂಖ್ಯೆ: ಜಿಪಂಹಾ/ಪ.ಶಾ/51/2011-12 ದಿನಾಂಕ: 21-12-2011

## <u>ಸಭಾಹ್ವಾನ ಪತ್ರ</u>

ಶ್ರೀ ಬಿ.ಆರ್.ಸತ್ಯನಾರಾಯಣ, ಅಧ್ಯಕ್ಷರು, ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ, ಇವರ ಅಧ್ಯಕ್ಷತೆಯಲ್ಲಿ **<u>ದಿನಾಂಕ: 29-12-2011ರಂದು ಗುರುವಾರ ಪೂರ್ವಾಹ್ನ:11-00ಗಂಟೆಗೆ</u>** ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ ಸಭೆಯನ್ನು ಹಾಸನ ಜಿಲ್ಲಾ ಪಂಚಾಯಿತಿ ಹೊಯ್ಸಳ ಸಭಾಂಗಣದಲ್ಲಿ ಕರೆಯಲಾಗಿದೆ. ಸದರಿ ಸಭೆಗೆ ಮಾನ್ಯ ಸದಸ್ಯರುಗಳು ಹಾಜರಾಗಿ ಸಲಹೆ ಸಹಕಾರ ನೀಡಲು ಕೋರಲಾಗಿದೆ.

ಯೋಜನಾ ನಿರ್ದೇಶಕರು,
ಡಿ.ಆರ್.ಡಿ.ಎ ಕೋಶ, ಹಾಗೂ ಸದಸ್ಯ ಕಾರ್ಯದರ್ಶಿ
ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ,
ಜಿಲ್ಲಾ ಪಂಚಾಯಿತಿ, ಹಾಸನ.

**ಸಭೆಯಲ್ಲಿ ಚರ್ಚಿಸಬೇಕಾದ ವಿಷಯಗಳು:**

1. ಜುಲೈ 2011 ಮತ್ತು ಆಗಸ್ಟ್ 2011ರ ಮಾಹೆಯ ಮಾಸಿಕ ಲೆಕ್ಕಗಳ ಅನುಮೋದನೆ ಬಗ್ಗೆ.
2. 2011-12ನೇ ಸಾಲಿನ ಆರ್ಥಿಕ ಇಲಾಖೆ/ಗ್ರಾಮೀಣ ಅಭಿವೃದ್ಧಿ ಇಲಾಖೆ ಹಾಗೂ ಕೇಂದ್ರ ಸರ್ಕಾರದಿಂದ 3ನೇ ಕಂತಿನ ಅನುದಾನ ಜಿಲ್ಲಾ ಪಂಚಾಯತ್‌ಗೆ ಬಿಡುಗಡೆಯಾಗಿರುವುದನ್ನು ಅನುಮೋದನೆ ಪಡೆಯುವ ಬಗ್ಗೆ.
3. ಕುಮಾರಿ ಯಮುನ ಬಿ.ಜೆ ರಾಷ್ಟ್ರಮಟ್ಟದ ಕ್ರೀಡಾಪಟು ಇವರಿಗೆ ಜಿಲ್ಲಾ ಪಂಚಾಯಿತಿಯಿಂದ ಕ್ರೀಡಾಪ್ರೋತ್ಸಾಹ ಧನ ನೀಡುವ ಕುರಿತು.
4. ಗ್ರಾಮಾಂತರ ಶಾಲೆಯ ಮಕ್ಕಳಿಗೆ ಜಿಲ್ಲಾ ಮಟ್ಟದ ಅಥ್ಲೆಟಿಕ್ಸ್ ಕ್ರೀಡಾಕೂಟ ನಡೆಸಲು ಆರ್ಥಿಕ ಸಹಾಯ ಕೋರಿ ಮನವಿ.

**<u>ಅಧ್ಯಕ್ಷರ ಅಪ್ಪಣೆ ಮೇರೆಗೆ ಇತರೆ ವಿಷಯಗಳು</u>**

ಪ್ರತಿಯನ್ನು:

1. ಶ್ರೀ ಬಿ.ಆರ್.ಸತ್ಯನಾರಾಯಣ, ಅಧ್ಯಕ್ಷರು, ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ
2. ಶ್ರೀ ಲಕ್ಷ್ಮಣಗೌಡ, ಸದಸ್ಯರು, ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ
3. ಶ್ರೀಮತಿ ಭಾಗ್ಯ, ಸದಸ್ಯರು, ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ

4. ಶ್ರೀ ಪುರುಷೋತ್ತಮ, ಸದಸ್ಯರು, ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ
5. ಶ್ರೀಮತಿ ಸಿ.ಎಸ್.ರತ್ನಮ್ಮ, ಸದಸ್ಯರು, ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ
6. ಶ್ರೀಮತಿ ಡಿ.ಜಿ.ಅಂಬಿಕಾ ರಾಮಣ್ಣ, ಸದಸ್ಯರು, ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ
7. ಶ್ರೀ ಎನ್.ಡಿ.ಕಿಶೋರ್, ಸದಸ್ಯರು, ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ
8. ಮಾನ್ಯ ಅಧ್ಯಕ್ಷರು, ಜಿಲ್ಲಾ ಪಂಚಾಯಿತಿ, ಹಾಸನ ಇವರ ಆಪ್ತಶಾಖೆಗೆ ಮಾಹಿತಿಗಾಗಿ
9. ಮಾನ್ಯ ಉಪಾಧ್ಯಕ್ಷರು, ಜಿಲ್ಲಾ ಪಂಚಾಯಿತಿ, ಹಾಸನ ಇವರ ಆಪ್ತಶಾಖೆಗೆ ಮಾಹಿತಿಗಾಗಿ
10. ಜಿಲ್ಲಾ ಪಂಚಾಯಿತಿ ಎಲ್ಲಾ ಮಾನ್ಯ ಸದಸ್ಯರುಗಳಿಗೆ ಮಾಹಿತಿಗಾಗಿ
11. ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯಿತಿ, ಹಾಸನರವರ ಆಪ್ತಶಾಖೆಗೆ
12. ಉಪ ಕಾರ್ಯದರ್ಶಿ(ಆಡಳಿತ), ಜಿಲಾ ಪಂಚಾಯಿತಿ, ಹಾಸನ.
13. ಉಪ ಕಾರ್ಯದರ್ಶಿ(ಅಭಿವೃದ್ಧಿ), ಜಿಲ್ಲಾ ಪಂಚಾಯಿತಿ, ಹಾಸನ.
14. ಮುಖ್ಯ ಲೆಕ್ಕಾಧಿಕಾರಿ, ಜಿಲ್ಲಾ ಪಂಚಾಯಿತಿ, ಹಾಸನ.
15. ಮುಖ್ಯ ಯೋಜನಾಧಿಕಾರಿ, ಜಿಲ್ಲಾ ಪಂಚಾಯಿತಿ, ಹಾಸನ.
16. ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಾಸನ ಮತ್ತು ಚನ್ನರಾಯಪಟ್ಟಣ
17. ಜಿಲ್ಲೆಯ ಎಲ್ಲಾ ಸಹಾಯಕ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಾಸನ ಮತ್ತು ಚನ್ನರಾಯಪಟ್ಟಣ
18. ಜಿಲ್ಲಾ ಪಂಚಾಯಿತಿ ವ್ಯಾಪ್ತಿಯ ಎಲ್ಲಾ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಕಳುಹಿಸುತ್ತಾ, ಪೂರ್ಣ ಮಾಹಿತಿಯೊಂದಿಗೆ ಇಲಾಖಾ ಮುಖ್ಯಸ್ಥರು ಸಭೆಗೆ ಕಡ್ಡಾಯವಾಗಿ ಹಾಜರಾಗಲು ಸೂಚಿಸಿದೆ.
19. ಉಪನಿರ್ದೇಶಕರು, ಮೂಲಭೂತ ಸೌಕರ್ಯಗಳ ಇಲಾಖೆ (ಭೂಸೇನಾ ನಿಗಮ), ಹಾಸನ.
20. ಕಛೇರಿ ಪ್ರತಿ.

# ದಿನಾಂಕ: 29-12-2011ಪೂರ್ವಾಹ್ನ:11-00ಗಂಟೆಗೆ ಹೊಯ್ಸಳ ಸಭಾಂಗಣ, ಜಿಲ್ಲಾ ಪಂಚಾಯಿತಿ, ಹಾಸನ ಇಲ್ಲಿ ನಡೆದ ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ ಸಭೆಯ ನಡವಳಿಗಳು

**ಅಧ್ಯಕ್ಷತೆ: ಶ್ರೀ ಬಿ.ಆರ್. ಸತ್ಯನಾರಾಯಣ, ಅಧ್ಯಕ್ಷರು,**

**ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ**

**ಹಾಜರಿ:06** **ಗೈರು ಹಾಜರಿ: 01**

| ಕ್ರಸಂ | ವಿಷಯ | ಚರ್ಚೆ | ತೀರ್ಮಾನ |
|---|---|---|---|
| ಯೋಜನಾ ನಿರ್ದೇಶಕರು, ಡಿ.ಆರ್.ಡಿ.ಎ. ಇವರು ಸಭೆಗೆ ಹಾಜರಿದ್ದ ಮಾನ್ಯ ಸಮಿತಿ ಅಧ್ಯಕ್ಷರು, ಸದಸ್ಯರು, ಮುಖ್ಯ ಲೆಕ್ಕಾಧಿಕಾರಿ, ಮುಖ್ಯ ಯೋಜನಾಧಿಕಾರಿ, ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಯವರನ್ನು ಸ್ವಾಗತಿಸುತ್ತಾ, ಅಧ್ಯಕ್ಷತೆ ವಹಿಸಿ ಸಭೆಯನ್ನು ನಡೆಸಿಕೊಡಬೇಕೆಂದು ಮಾನ್ಯ ಸಮಿತಿ ಅಧ್ಯಕ್ಷರನ್ನು ಕೋರಿದರು. | | | |
| | | ಯೋಜನಾ ನಿರ್ದೇಶಕರು ಮಾತನಾಡುತ್ತಾ, ಹಿಂದಿನ ಸಭೆಯಲ್ಲಿ ತೀರ್ಮಾನಿಸಿದಂತೆ, 5 ಇಲಾಖೆಗಳ ಹಣಕಾಸಿಗೆ ಸಂಬಂಧಿಸಿದಂತೆ, ವಿವರಗಳನ್ನು ಲೆಕ್ಕಪತ್ರ ಶಾಖೆಯವರು ಮಂಡಿಸಲಿದ್ದು, ಪರಿಶೀಲನೆ ನಡೆಸಬೇಕೆಂದು ಕೋರಿದರು.<br>ಮಾನ್ಯ ಸದಸ್ಯರಾದ ಶ್ರೀ ಎನ್.ಡಿ.ಕಿಶೋರ್ ರವರು ಮಾತನಾಡುತ್ತಾ, ವಿವಿಧ ಇಲಾಖೆಗಳಿಂದ ಅನುಷ್ಠಾನಗೊಳಿಸುವ ಅಭಿವೃದ್ಧಿ ಕಾರ್ಯಕ್ರಮಗಳಿಗೆ ಸಂಬಂಧಿಸಿದಂತೆ, ಖರ್ಚು ಮಾಡಿರುವ ಬಗ್ಗೆ ವೋಚರ್ ಮತ್ತು ಬಿಲ್ಲುಗಳನ್ನು ನೀಡುವುದು ಸೂಕ್ತವೆಂದು ಅಭಿಪ್ರಾಯಪಟ್ಟರು.<br>ಇದಕ್ಕೆ ಮಾನ್ಯ ಸಮಿತಿ ಅಧ್ಯಕ್ಷರು ಮತ್ತು ಇತರೆ ಸದಸ್ಯರುಗಳು ತಮ್ಮ ಸಹಮತವನ್ನು ವ್ಯಕ್ತಪಡಿಸಿದರು.<br>ಮಾನ್ಯ ಅಧ್ಯಕ್ಷರು ಮಾತನಾಡುತ್ತಾ, ಇಲಾಖಾ ಮುಖ್ಯಸ್ಥರುಗಳು ಇಲಾಖೆಯ ಯೋಜನೆಗಳ ಬಗ್ಗೆ ವಿವರ ನೀಡುವಂತೆ ತಿಳಿಸಿದರು.<br>**ಕೃಷಿ ಇಲಾಖೆ:**<br>ಜಂಟಿ ಕೃಷಿ ನಿರ್ದೇಶಕರು ಮಾತನಾಡುತ್ತಾ, 2011-12ನೇ ಸಾಲಿಗೆ ಜಿಲ್ಲಾ ಪಂಚಾಯಿತಿ ಕಾರ್ಯಕ್ರಮಗಳಿಗೆ ಸಂಬಂಧಿಸಿದಂತೆ, 10 ಕಾರ್ಯಕ್ರಮಗಳಿಗೆ ಒಟ್ಟು ರೂ. 186.00ಲಕ್ಷಗಳ ಅನುದಾನ ನಿಗದಿಯಾಗಿದ್ದು, ಕಾರ್ಯಕ್ರಮಗಳ ಅನುಷ್ಠಾನದ ಕುರಿತಂತೆ ವಿವರಗಳನ್ನು ಸಭೆಗೆ ನೀಡಿದರು.<br>ಮಾನ್ಯ ಸದಸ್ಯರಾದ ಶ್ರೀ ಎನ್.ಡಿ.ಕಿಶೋರ್ ರವರು ಮಾತನಾಡುತ್ತಾ, ಕೃಷಿ ಇಲಾಖೆಯ ಯೋಜನೆಗಳ ಬಗ್ಗೆ ಕೆಲವು ರೈತರಿಗೆ ಮಾತ್ರ ಮಾಹಿತಿಯಿರುತ್ತದೆ. ಆದ್ದರಿಂದ ಇಲಾಖೆಯ ಯೋಜನೆಗಳ ಬಗ್ಗೆ ವ್ಯಾಪಕ ಪ್ರಚಾರ ಮಾಡಲು ಸೂಕ್ತ | ಸಭೆಯಲ್ಲಿ ಚರ್ಚಿಸಿದಂತೆ, ಆಲೂರು ತಾಲ್ಲೂಕಿನ ಕೆಲವು ಸರ್ಕಾರಿ ಪ್ರೌಢಶಾಲೆಗಳಿಗೆ ವಿದ್ಯಾರ್ಥಿ ಗಳು ಕಾಡಾನೆಗಳ ಹಾವಳಿಯಿಂದ ಶಾಲೆಗೆ ಹೋಗಿಬರಲು ತುಂಬಾ ತೊಂದರೆ ಯಾಗಿದ್ದು, ಸದರಿ ವಿದ್ಯಾರ್ಥಿಗಳು ಶಾಲೆಗೆ ಹಾಜರಾಗಲು ಅನುಕೂಲ ವಾಗುವಂತೆ ಸಂಚಾರಿ ಸೌಲಭ್ಯವನ್ನು ಒದಗಿಸಲು ಸರ್ಕಾರಕ್ಕೆ ಪ್ರಸ್ತಾವನೆ ಯನ್ನು ಸಲ್ಲಿಸಲು ಸಭೆಯಲ್ಲಿ ಸರ್ವಾನು ಮತದಿಂದ ನಿರ್ಣಯಿಸಲಾಯಿತು. |

ಮಾನ್ಯ ಸದಸ್ಯರಾದ ಶ್ರೀ ಎಸ್.ಡಿ.ಕಿಶೋರ್ ರವರು ಮಾತನಾಡುತ್ತಾ, ಕೃಷಿ ಇಲಾಖೆಯ ಯೋಜನೆಗಳ ಬಗ್ಗೆ ಕೆಲವು ರೈತರಿಗೆ ಮಾತ್ರ ಮಾಹಿತಿಯಿರುತ್ತದೆ. ಆದ್ದರಿಂದ ಇಲಾಖೆಯ ಯೋಜನೆಗಳ ಬಗ್ಗೆ ವ್ಯಾಪಕ ಪ್ರಚಾರ ಮಾಡಲು ಸೂಕ್ತ ಕ್ರಮ ವಹಿಸಬೇಕೆಂದು ಕೋರಿದರು. ಈ ಬಗ್ಗೆ ಸಾರ್ವಜನಿಕವಾಗಿ ಹೆಚ್ಚಿನ ಸಂಖ್ಯೆಯಲ್ಲಿ ಭಿತ್ತಿ ಪತ್ರಗಳನ್ನು ಹಾಕುವುದು ಸೂಕ್ತವೆಂದು ಅಭಿಪ್ರಾಯಪಟ್ಟರು.

ಮಾನ್ಯ ಅಧ್ಯಕ್ಷರು ಮಾತನಾಡುತ್ತಾ, ಕೆ.ಡಿ.ಪಿ ಸಭೆಯಲ್ಲಿ ತಿಳಿಸಿದಂತೆ, ಜಿಲ್ಲೆಯಲ್ಲಿ ಮೆಕ್ಕೆ ಜೋಳದ ಬಿತ್ತನೆ ಬೀಜ ಉತ್ಪಾದನೆಗೆ ಸಂಬಂಧಿಸಿದಂತೆ, ಪ್ರತಿ ತಾಲ್ಲೂಕಿನಲ್ಲಿ 1-2 ಎಕರೆ ಪ್ರದೇಶದಲ್ಲಿ ಪ್ರಾಯೋಗಿಕವಾಗಿ ಬಿತ್ತನೆ ಬೀಜ ಬೆಳೆಯುವ ಬಗ್ಗೆ ರೈತರಿಗೆ ಉತ್ತೇಜನ ನೀಡಿ ಕ್ರಮ ವಹಿಸಬೇಕೆಂದು ಜಂಟಿ ನಿರ್ದೇಶಕರಿಗೆ ತಿಳಿಸಿದರು.

**<u>ತೋಟಗಾರಿಕೆ ಇಲಾಖೆ:</u>**

ಸಹಾಯಕ ತೋಟಗಾರಿಕಾ ನಿರ್ದೇಶಕರು ಮಾತನಾಡುತ್ತಾ, ಹನಿ ನೀರಾವರಿ ಯೋಜನೆಯಡಿ ರೈತರು ಇಲಾಖೆಯಿಂದ ನಿಗದಿಪಡಿಸಿರುವ ಅಧಿಕೃತ ಸಂಸ್ಥೆಯಿಂದ ಹನಿ ನೀರಾವರಿ ಸೌಲಭ್ಯವನ್ನು ಅಳವಡಿಸಿಕೊಂಡಲ್ಲಿ ಇಲಾಖೆಯಿಂದ , 5 ಎಕರೆವರೆಗೆ ಶೇ.75 ಮತ್ತು 5 ಎಕರೆಗಿಂತ ಹೆಚ್ಚು ಜಮೀನು ಹೊಂದಿರುವವರಿಗೆ ಶೇ.50ರಂತೆ ಸಹಾಯಧನವನ್ನು ನೀಡಲು ಕ್ರಮ ವಹಿಸಲಾಗುವುದು.... ಈ ಯೋಜನೆಯಡಿ ನಿಗದಿಪಡಿಸಿರುವ ಅನುದಾನದಲ್ಲಿ ರೂ.5.00ಲಕ್ಷಗಳು ಖರ್ಚಾಗಿದ್ದು, ಜನವರಿ 2012 ಅಂತ್ಯಕ್ಕೆ ನಿಗದಿಪಡಿಸಿರುವ ಪೂರ್ಣ ಅನುದಾನವನ್ನು ವಿನಿಯೋಗಿಸಲು ಕ್ರಮ ವಹಿಸಲಾಗುವುದೆಂದು ಸಭೆಗೆ ವಿವರ ನೀಡಿದರು.

ಮಾನ್ಯ ಅಧ್ಯಕ್ಷರು ಮಾತನಾಡುತ್ತಾ, ಜಿ-9 ಬಾಳೆ ಬೆಳೆಗೆ ಸಹಾಯಧನ ನೀಡುವಂತೆ ಕೋರಿ ಎಷ್ಟು ಅರ್ಜಿಗಳು ಬಂದಿವೆ ಮತ್ತು ಎಷ್ಟು ಅರ್ಜಿಗಳಿಗೆ ಸಹಾಯಧನವನ್ನು ನೀಡಲಾಗಿದೆ ಹಾಗೂ ಇನ್ನೂ ಎಷ್ಟು ಅರ್ಜಿಗಳು ಬಾಕಿ ಉಳಿದಿವೆ ಮತ್ತು ಯಾವ ಕಾರಣಕ್ಕಾಗಿ ಬಾಕಿ ಉಳಿದಿವೆ ಎಂಬ ಬಗ್ಗೆ ವಿವರ ನೀಡುವಂತೆ ಸಹಾಯಕ ನಿರ್ದೇಶಕರಿಗೆ ತಿಳಿಸಿದರು.

ಮುಂದುವರೆದು, ಕೆಲವು ತಾಲ್ಲೂಕುಗಳಲ್ಲಿ ಹಣ ಖರ್ಚಾಗಿರುವುದಿಲ್ಲ ಮತ್ತು ಇನ್ನು ಕೆಲವು ತಾಲ್ಲೂಕುಗಳಿಗೆ ಬಿಡುಗಡೆ ಮಾಡಿರುವ ಹಣ ಪೂರ್ಣ ಖರ್ಚಾಗಿದ್ದು, ಇನ್ನೂ ಅರ್ಜಿಗಳು ಬಾಕಿ ಉಳಿದಿರುತ್ತವೆ. ಆದ್ದರಿಂದ, ಉಳಿಕೆಯಾಗುವ ಅನುದಾನವನ್ನು ಬೇಡಿಕೆ ಇರುವ ತಾಲ್ಲೂಕುಗಳಿಗೆ ಬದಲಾವಣೆ ಮಾಡಲು ಕ್ರಮ ವಹಿಸುವಂತೆ ಮತ್ತು ಈ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಬೇಕೆಂದು ತಿಳಿಸಿದರು.

ಸಹಾಯಕ ತೋಟಗಾರಿಕಾ ನಿರ್ದೇಶಕರು ಮಾತನಾಡುತ್ತಾ, 2011-12ನೇ ಸಾಲಿನಲ್ಲಿ ಇಲಾಖೆಯ ವತಿಯಿಂದ ಯಾವುದೇ ಪರಿಕರಗಳನ್ನು ರೈತರಿಗೆ ನೀಡಲಾಗುತ್ತಿಲ್ಲ. ಅದರ ಬದಲಿಗೆ ರೈತರೇ ನೇರವಾಗಿ ಟಿನ್

| | | | |
|---|---|---|---|
| | | ನಂಬರ್ ಹೊಂದಿರುವ ಸಂಸ್ಥೆಯವರಿಂದ ಅವಶ್ಯ ಪರಿಕರಗಳನ್ನು ಖರೀದಿಸಿ ಬಿಲ್ಲನ್ನು ಇಲಾಖೆಗೆ ನೀಡಿದಲ್ಲಿ ಸಹಾಯಧನ ನೀಡಲಾಗುತ್ತಿದೆ ಎಂದು ಸಭೆಗೆ ವಿವರ ನೀಡಿದರು.<br>ಮಾನ್ಯ ಸದಸ್ಯರಾದ ಶ್ರೀ ಲಕ್ಷ್ಮಣ್ ಗೌಡರವರು ಮಾತನಾಡುತ್ತಾ, ರೈತರು ನೇರವಾಗಿ ಪರಿಕರಗಳನ್ನು ಖರೀದಿಸಿ ಬಿಲ್ಲನ್ನು ಇಲಾಖೆಯವರಿಗೆ ನೀಡಿದಲ್ಲಿ ಸಹಾಯಧನವನ್ನು ನೀಡಲು ಇಲಾಖಾಧಿಕಾರಿಗಳು ಹಲವಾರು ದಾಖಲೆಗಳನ್ನು ನೀಡುವಂತೆ ತಿಳಿಸುತ್ತಾರೆ ಮತ್ತು ಕ್ರಾಸ್ ಚೆಕ್ ನೀಡುತ್ತಾರೆ. ಇದರಿಂದ, ರೈತರಿಗೆ ಯಾವುದೇ ಪ್ರಯೋಜನವಾಗುವುದಿಲ್ಲ. ಆದ್ದರಿಂದ, ಸಹಾಯಧನ ಚೆಕ್ ಗಳನ್ನು ಕ್ರಾಸ್ ಚೆಕ್ ಬದಲಿಗೆ ಸಾಮಾನ್ಯ ಚೆಕ್ ನೀಡುವುದು ಉತ್ತಮವೆಂದು ಅಭಿಪ್ರಾಯಿಸಿ ಈ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಬೇಕೆಂದು ಕೋರಿದರು.<br>ಇದಕ್ಕೆ ಸಮಿತಿಯ ಅಧ್ಯಕ್ಷರು ಮತ್ತು ಸದಸ್ಯರುಗಳು ತಮ್ಮ ಸಹಮತವನ್ನು ವ್ಯಕ್ತಪಡಿಸಿದರು.<br>ಮಾನ್ಯ ಅಧ್ಯಕ್ಷರು ಮಾತನಾಡುತ್ತಾ, ಹನಿ ನೀರಾವರಿ ಏಜನ್ಸಿಯವರು ನಿಗದಿತ ಅವಧಿಯಲ್ಲಿ ರೈತರಿಗೆ ಸೌಲಭ್ಯವನ್ನು ನೀಡುತ್ತಿಲ್ಲವೆಂದು ದೂರುಗಳು ಬರುತ್ತಿವೆ. ಈ ಬಗ್ಗೆ ಸಂಬಂಧಪಟ್ಟ ಏಜನ್ಸಿಯವರಿಗೆ ನಿರ್ದೇಶನ ನೀಡಬೇಕೆಂದು ತಿಳಿಸಿದರು.<br>ಸಹಾಯಕ ತೋಟಗಾರಿಕಾ ನಿರ್ದೇಶಕರು ಮಾತನಾಡುತ್ತಾ, 2011-12ನೇ ಸಾಲಿನಲ್ಲಿ ರಾಜ್ಯವಲಯದಡಿ ರೂ.88.00ಲಕ್ಷಗಳು ಮತ್ತು ಜಿಲ್ಲಾ ವಲಯದಡಿ ರೂ.32.00ಲಕ್ಷಗಳ ಅನುದಾನ ನಿಗದಿಯಾಗಿದ್ದು, ಏಜನ್ಸಿಗಳ ಮೂಲಕ ಅನುಷ್ಠಾನ ಮಾಡಲು ಕ್ರಮ ವಹಿಸಲಾಗುವುದು ಎಂದು ವಿವರ ನೀಡಿದರು.<br>ಮಾನ್ಯ ಸದಸ್ಯರಾದ ಶ್ರೀ ಎನ್.ಡಿ.ಕಿಶೋರ್ ರವರು ಮಾತನಾಡುತ್ತಾ, ಪುಷ್ಪೋದ್ಯಮಕ್ಕೆ ಹೆಚ್ಚಿನ ಪ್ರೋತ್ಸಾಹ ನೀಡುವ ಬಗ್ಗೆ ಕ್ರಮ ವಹಿಸಬೇಕೆಂದು ಕೋರಿದರು.<br>ಸಹಾಯಕ ನಿರ್ದೇಶಕರು ಮಾತನಾಡುತ್ತಾ, ಜಿಲ್ಲೆಯಲ್ಲಿ ಪುಷ್ಪೋದ್ಯಮಕ್ಕೆ ಹೆಚ್ಚಿನ ಅವಕಾಶವಿದ್ದು, ಈ ಬಗ್ಗೆ ಪ್ರಸ್ತಾವನೆಯನ್ನು ಸಲ್ಲಿಸುವಂತೆ ಕೇಂದ್ರ ಕಛೇರಿಯಿಂದ ತಿಳಿಸಿರುತ್ತಾರೆ. ಪ್ರಸ್ತಾವನೆಯನ್ನು ಸಿದ್ಧಪಡಿಸಿ ಸಲ್ಲಿಸಲು ಕ್ರಮ ವಹಿಸಲಾಗುವುದು ಎಂದು ಸಭೆಗೆ ವಿವರ ನೀಡಿದರು.<br>ಮಾನ್ಯ ಅಧ್ಯಕ್ಷರು ಮಾತನಾಡುತ್ತಾ, ಆಸಕ್ತ ರೈತರಿಗೆ ಪುಷ್ಪೋದ್ಯಮ ಬೆಳೆಗಳ ಬಗ್ಗೆ ಹೆಚ್ಚಿನ ವಿವರಗಳನ್ನು ಪಡೆಯಲು ಅನುಕೂಲವಾಗುವಂತೆ ಅಧ್ಯಯನ ಪ್ರವಾಸ ಕಾರ್ಯಕ್ರಮವನ್ನು ಹಮ್ಮಿಕೊಳ್ಳುವುದು ಸೂಕ್ತವೆಂದು ತಿಳಿಸುತ್ತಾ, ಈ ಬಗ್ಗೆ ಗಮನ ಹರಿಸಬೇಕೆಂದು ತಿಳಿಸಿದರು. | |

ಮುಂದುವರೆದು, ರುಚಿಗೋಲ್ಡ್ ಸಂಸ್ಥೆಯವರು ತಾಳೆಬೆಳೆಯುವ ರೈತರೊಂದಿಗೆ ಒಪ್ಪಂದ ಮಾಡಿಕೊಳ್ಳಲು ಸಿದ್ದರಿದ್ದು, ಮಾರುಕಟ್ಟೆಗೆ ತೊಂದರೆಯಿರುವುದಿಲ್ಲ. ಅಲ್ಲದೆ, ತಾಳೆಬೆಳೆಯಿಂದ ರೈತರಿಗೆ ಹೆಚ್ಚಿನ ಖರ್ಚಿಲ್ಲದೆ ಆದಾಯವಿರುತ್ತದೆ. 3 ವರ್ಷಕ್ಕೆ ಫಸಲು ಬರುವ ಹೊಸ ತಳಿ ಮಾರುಕಟ್ಟೆಯಲ್ಲಿ ಲಭ್ಯವಿದೆ. ಆದ್ದರಿಂದ, ಇಲಾಖಾಧಿಕಾರಿಗಳು ವೈಯಕ್ತಿಕ ಆಸಕ್ತಿ ವಹಿಸಿ ತಾಳೆ ಬೆಳೆ ವಿಸ್ತರಣೆಗೆ ಕ್ರಮ ವಹಿಸಬೇಕೆಂದು ತಿಳಿಸಿದರು.

ಮಾನ್ಯ ಸದಸ್ಯರಾದ ಶ್ರೀ ಎನ್.ಡಿ.ಕಿಶೋರ್ ರವರು ಮಾತನಾಡುತ್ತಾ, ತಾಳೆ ಬೆಳೆ ವಿಸ್ತರಣೆಗೆ ಸಂಬಂಧಿಸಿದಂತೆ, ಹೆಚ್ಚಿನ ಪ್ರಚಾರವನ್ನು ನೀಡಿ ಕ್ರಮ ವಹಿಸಬೇಕೆಂದು ಕೋರಿದರು.

**ರೇಷ್ಮೆ ಇಲಾಖೆ:**

ಉಪ ನಿರ್ದೇಶಕರು ಮಾತನಾಡುತ್ತಾ, ಜಿಲ್ಲಾ ಪಂಚಾಯಿತಿ ಕಾರ್ಯಕ್ರಮಗಳ ಪ್ರಗತಿ ಬಗ್ಗೆ ಸಭೆಗೆ ವಿವರಗಳನ್ನು ನೀಡಿದರು.

ಮಾನ್ಯ ಅಧ್ಯಕ್ಷರು ಮಾತನಾಡುತ್ತಾ, ಚಾಕಿ ಕೇಂದ್ರಗಳನ್ನು ಇಲಾಖೆಯ ವತಿಯಿಂದ ನಿರ್ವಹಣೆ ಮಾಡಿದಲ್ಲಿ ಆರ್ಥಿಕವಾಗಿ ರೈತರಿಗೆ ಹೆಚ್ಚಿನ ಅನುಕೂಲವಾಗುತ್ತದೆ. ಆದ್ದರಿಂದ, ಪ್ರತಿ ತಾಲ್ಲೂಕಿನಲ್ಲಿಯೂ ಸಹ ಚಾಕಿ ಕೇಂದ್ರಗಳನ್ನು ಪ್ರಾರಂಭ ಮಾಡಲು ಕ್ರಮ ವಹಿಸುವಂತೆ ಸಹಾಯಕ ನಿರ್ದೇಶಕರಿಗೆ ತಿಳಿಸಿದರು.

ಮಾನ್ಯ ಸದಸ್ಯರಾದ ಶ್ರೀ ಎನ್.ಡಿ.ಕಿಶೋರ್ ರವರು ಮಾತನಾಡುತ್ತಾ, ರೇಷ್ಮೆ ಬೆಳೆಗಾರರ ಸಂಘಗಳನ್ನು ಮಾಡಿದಲ್ಲಿ ಹೆಚ್ಚಿನ ಅನುಕೂಲವಾಗುತ್ತದೆ. ಈ ಬಗ್ಗೆ ಕ್ರಮ ವಹಿಸಬೇಕೆಂದು ಕೋರಿದರು.

**ಪಶುಪಾಲನಾ ಇಲಾಖೆ:**

ಉಪ ನಿರ್ದೇಶಕರು ಮಾತನಾಡುತ್ತಾ, ಜಿಲ್ಲಾ ಪಂಚಾಯಿತಿ ಕಾರ್ಯಕ್ರಮಗಳ ಪ್ರಗತಿ ಬಗ್ಗೆ ಸಭೆಗೆ ವಿವರ ನೀಡಿದರು.

ಮಾನ್ಯ ಅಧ್ಯಕ್ಷರು ಮಾತನಾಡುತ್ತಾ, ಬೇಸಿಗೆ ಕಾಲ ಪ್ರಾರಂಭವಾಗುತ್ತಿದ್ದು, ಜಾನುವಾರುಗಳಿಗೆ ಕಾಲುಬಾಯಿ ಜ್ವರಕ್ಕೆ ಲಸಿಕೆಗಳನ್ನು ಹಾಕಲು ಕ್ರಮ ವಹಿಸಬೇಕೆಂದು ತಿಳಿಸಿದರು.

ಮುಂದುವರೆದು, ನಬಾರ್ಡ್ ವತಿಯಿಂದ ಸಹಾಯಧನದಡಿಯಲ್ಲಿ ಮಿಶ್ರತಳಿ ಹಸುಗಳನ್ನು ನೀಡುವ ಬಗ್ಗೆ ಏನು ಕ್ರಮ ವಹಿಸಲಾಗಿದೆ ಎಂಬ ಕುರಿತು ಮಾಹಿತಿ ನೀಡುವಂತೆ ಉಪ ನಿರ್ದೇಶಕರಿಗೆ ತಿಳಿಸಿದರು.

ಉಪ ನಿರ್ದೇಶಕರು ಮಾತನಾಡುತ್ತಾ, ಮಿಶ್ರತಳಿ ಹಸುಗಳನ್ನು ರೈತರಿಗೆ ಸಹಾಯಧನದಡಿಯಲ್ಲಿ ನೀಡುವ ಬಗ್ಗೆ ಲೀಡ್ ಬ್ಯಾಂಕ್ ಸಭೆಯಲ್ಲಿ ಸಾಕಷ್ಟು ಬಾರಿ ಚರ್ಚೆ ನಡೆಸಲಾಗಿದೆ. 5500 ಅರ್ಜಿಗಳು ಬಂದಿದ್ದು, ಅರ್ಜಿಗಳನ್ನು

| | | | |
|---|---|---|---|
| | | ಸಂಬಂಧಪಟ್ಟ ಬ್ಯಾಂಕುಗಳಿಗೆ ಕಳುಹಿಸಲಾಗಿದೆ. ಬ್ಯಾಂಕಿನವರು ಸಾಲವನ್ನು ನೀಡಿದಲ್ಲಿ 5 ವರ್ಷಗಳಿಗೆ ನಿಗದಿಪಡಿಸಬಹುದಾಗಿದೆ. ಇದನ್ನು ಬ್ಯಾಂಕರ್ಸ್ ಸಭೆಯಲ್ಲಿ ಮನವರಿಕೆ ಮಾಡಲಾಗಿದೆ. ಪ್ರತಿ ಬ್ಯಾಂಕಿನಿಂದ 10 ಹಸುಗಳಿಗೆ ಕಡ್ಡಾಯವಾಗಿ ಸಾಲವನ್ನು ನೀಡುವಂತೆ ಲೀಡ್ ಬ್ಯಾಂಕ್ ಸಭೆಯಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ನಿರ್ದೇಶನ ನೀಡಿರುತ್ತಾರೆ ಎಂದು ಸಭೆಗೆ ವಿವರ ನೀಡಿದರು.<br>ಮಾನ್ಯ ಸದಸ್ಯರಾದ ಶ್ರೀ ಲಕ್ಷ್ಮಣಗೌಡರವರು ಮಾತನಾಡುತ್ತಾ, ಹೊಸ ಕಟ್ಟಡಗಳ ಬಗ್ಗೆ ವಿವರ ನೀಡಬೇಕೆಂದು ಕೋರಿದರು.<br>ಉಪ ನಿರ್ದೇಶಕರು ಮಾತನಾಡುತ್ತಾ, ಹೊಸ ಕಟ್ಟಡ ನಿರ್ಮಾಣಕ್ಕೆ ಕೇಂದ್ರ ಸರ್ಕಾರದಿಂದ ಹಣ ಬಿಡುಗಡೆಯಾಗುತ್ತದೆ. ಅದರಲ್ಲಿ 2 ಹೊಸ ಕಟ್ಟಡಗಳು ಮಂಜೂರಾಗಿದ್ದು, ಅದರಲ್ಲಿ ದುದ್ದ ಪಶು ಆಸ್ಪತ್ರೆಯೂ ಸೇರಿದ್ದು, ಪ್ರಸ್ತಾವನೆಯು ಆರ್ಥಿಕ ಇಲಾಖೆಯ ಅನುಮೋದನೆಗೆ ಹೋಗಿರುತ್ತದೆ. ಆರ್ಥಿಕ ಇಲಾಖೆಯಿಂದ ಅನುಮೋದನೆಗೊಂಡ ತಕ್ಷಣವೇ ಕಟ್ಟಡ ನಿರ್ಮಾಣಕ್ಕೆ ಕ್ರಮ ವಹಿಸಲಾಗುವುದು ಎಂದು ವಿವರ ನೀಡಿದರು.<br>**<u>ಮೀನುಗಾರಿಕೆ ಇಲಾಖೆ:</u>**<br>ಹಿರಿಯ ಸಹಾಯಕ ಮೀನುಗಾರಿಕಾ ನಿರ್ದೇಶಕರು ಮಾತನಾಡುತ್ತಾ, ಜಿಲ್ಲಾ ಪಂಚಾಯಿತಿ ಕಾರ್ಯಕ್ರಮಗಳ ಪ್ರಗತಿ ವರದಿಯನ್ನು ಸಭೆಗೆ ನೀಡಿದರು.<br>ಮಾನ್ಯ ಅಧ್ಯಕ್ಷರು ಮಾತನಾಡುತ್ತಾ, ಬೇಲೂರು ಮತ್ತು ಗೊರೂರಿನಲ್ಲಿರುವ ಜಲಾಶಯಗಳಲ್ಲಿ ಮೀನು ಮರಿಗಳನ್ನು ಸಾಕಾಣೆ ಮಾಡುವ ಬಗ್ಗೆ ಕ್ರಮ ವಹಿಸಬೇಕೆಂದು ತಿಳಿಸಿದರು.<br>ಮಾನ್ಯ ಸದಸ್ಯರಾದ ಶ್ರೀ ಲಕ್ಷ್ಮಣಗೌಡ ಮತ್ತು ಶ್ರೀ ಎನ್.ಡಿ.ಕಿಶೋರ್ ಕುಮಾರ್ ರವರು ಮಾತನಾಡುತ್ತಾ, ಮೀನುಮರಿಗಳನ್ನು ಸಾಕಾಣೆ ಮಾಡಲು ತೊಟ್ಟಿಗಳಿವೆ. ಆದರೆ, ಬೇಡಿಕೆಗನುಗುಣವಾಗಿ ಮೀನುಮರಿ ಸಾಕಾಣಿಕೆ ಮಾಡುತ್ತಿಲ್ಲ. ದೊಡ್ಡ ಪ್ರಮಾಣದಲ್ಲಿ ಮೀನುಮರಿ ಸಾಕಾಣೆ ಮಾಡಲು ಕ್ರಮ ವಹಿಸಬೇಕೆಂದು ಕೋರಿದರು.<br>ಮಾನ್ಯ ಸದಸ್ಯರಾದ ಶ್ರೀ ಲಕ್ಷ್ಮಣಗೌಡರವರು ಮಾತನಾಡುತ್ತಾ, ಮೀನುಮರಿ ಸಾಕಾಣಿಗೆ ಎಷ್ಟು ಅನುದಾನ ಲಭ್ಯವಿದೆ. ಸದರಿ ಅನುದಾನದಲ್ಲಿ ಎಷ್ಟು ಮೀನುಮರಿಗಳನ್ನು ರೈತರಿಗೆ ವಿತರಣೆ ಮಾಡಲಾಗಿದೆ ಎಂಬ ಬಗ್ಗೆ ವಿವರ ನೀಡುವಂತೆ ಕೋರಿದರು. | |

ಮಾನ್ಯ ಅಧ್ಯಕ್ಷರು ಮಾತನಾಡುತ್ತಾ, ಸಾಕಷ್ಟು ಆದಾಯ ಬರುವ ಕೆರೆಗಳನ್ನು 10-20 ವರ್ಷಗಳಿಂದ ಏಕ ವ್ಯಕ್ತಿಗೇ ನೀಡುತ್ತಿರುವುದು ಕಂಡುಬರುತ್ತಿದೆ. ಆದ್ದರಿಂದ ಕೆರೆಗಳ ಹರಾಜಿನ ಬಗ್ಗೆ ವ್ಯಾಪಕ ಪ್ರಚಾರವನ್ನು ನೀಡಲು ಕ್ರಮ ವಹಿಸಬೇಕೆಂದು ತಿಳಿಸಿದರು. ಮತ್ತು ಜಿಲ್ಲೆಯಲ್ಲಿ ಸೀಗಡಿಯನ್ನು ಬೆಳೆಯಲು ಅಗತ್ಯ ಕ್ರಮ ವಹಿಸುವಂತೆ ತಿಳಿಸಿದರು.

**<u>ಶಿಕ್ಷಣ ಇಲಾಖೆ:</u>**

ಉಪ ನಿರ್ದೇಶಕರು ಮಾತನಾಡುತ್ತಾ, ಜಿಲ್ಲಾ ಪಂಚಾಯಿತಿ ಯೋಜನೆಗಳಡಿಯಲ್ಲಿ ಸಾಧಿಸಿರುವ ಪ್ರಗತಿಯ ಬಗ್ಗೆ ವಿವರಗಳನ್ನು ಸಭೆಗೆ ನೀಡಿದರು.

ಮಾನ್ಯ ಅಧ್ಯಕ್ಷರು ಮಾತನಾಡುತ್ತಾ, ಆಲೂರು ತಾಲ್ಲೂಕಿನಲ್ಲಿ ಆನೆ ಹಾವಳಿಯಿಂದ ಕೆಲವು ಸರ್ಕಾರಿ ಪ್ರೌಢಶಾಲೆಗಳ ಮಕ್ಕಳು ಶಾಲೆಗೆ ಹೋಗಿಬರಲು ತುಂಬಾ ತೊಂದರೆಯಾಗಿರುತ್ತದೆ. ಅಲ್ಲದೆ, ಪರೀಕ್ಷಾ ಸಮಯ ಬರುತ್ತಿರುವುದರಿಂದ, ಸದರಿ 13 ಶಾಲೆಗಳ ಮಕ್ಕಳ ವ್ಯಾಸಂಗದ ದೃಷ್ಟಿಯಿಂದ ಸಂಚಾರಿ ಸೌಲಭ್ಯವನ್ನು ನೀಡುವ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿ ಕ್ರಮ ವಹಿಸಬೇಕೆಂದು ಉಪ ನಿರ್ದೇಶಕರಿಗೆ ತಿಳಿಸಿದರು.

ಉಪ ನಿರ್ದೇಶಕರು ಮಾತನಾಡುತ್ತಾ, ಪ್ರಾಥಮಿಕ ಶಾಲೆಯ ಮಕ್ಕಳಿಗೆ ಸಂಚಾರಿ ಸೌಲಭ್ಯವನ್ನು ಒದಗಿಸಲು ಅವಕಾಶವಿದ್ದು, ಪ್ರೌಢಶಾಲೆ ಮಕ್ಕಳಿಗೆ ಅವಕಾಶವಿರುವುದಿಲ್ಲವೆಂದು ಅಭಿಪ್ರಾಯಪಟ್ಟರು.

ಮಾನ್ಯ ಅಧ್ಯಕ್ಷರು ಮಾತನಾಡುತ್ತಾ, ಸಭೆಯಲ್ಲಿ ನಿರ್ಣಯವನ್ನು ಮಾಡಿ ವಾಸ್ತವಾಂಶಗಳ ಸಮರ್ಥನೆಯೊಂದಿಗೆ ಸರ್ಕಾರಕ್ಕೆ ಪ್ರಸ್ತಾವನೆಯನ್ನ ಸಲ್ಲಿಸಲು ಕ್ರಮ ವಹಿಸಬೇಕೆಂದು ತಿಳಿಸಿದರು.

ಮಾನ್ಯ ಸದಸ್ಯರಾದ ಶ್ರೀ ಎನ್.ಡಿ.ಕಿಶೋರ್ ರವರು ಮಾತನಾಡುತ್ತಾ, ಶಿಥಿಲಗೊಂಡಿರವ ಶಾಲಾ ಕಟ್ಟಡಗಳನ್ನು ಕೆಡುವಲು ಅನುಮತಿ ಕೋರಿ ಶಾಲೆಗಳ ಪಟ್ಟಿಯನ್ನು ನೀಡಿದ್ದರೂ ಸಹ ಇಲ್ಲಿಯವರೆಗೆ ಉಪ ನಿರ್ದೇಶಕರು ಅನುಮತಿ ನೀಡಿರುವುದಿಲ್ಲ. ಈ ಬಗ್ಗೆ ಕ್ರಮ ವಹಿಸಬೇಕೆಂದು ತಿಳಿಸಿದರು. ಚನ್ನರಾಯಪಟ್ಟಣ ತಾಲ್ಲೂಕು ಅಡೇನಹಳ್ಳಿ ಶಾಲಾ ಕಟ್ಟಡ ಶಿಥಿಲಗೊಂಡಿದ್ದು, ಬಿದ್ದುಹೋಗಿರುತ್ತದೆ. ಅಂದು ಭಾನುವಾರ ರಜಾದಿನವಾಗಿದ್ದರಿಂದ, ಯಾವುದೇ ಅನಾಹುತವಾಗಿರುವುದಿಲ್ಲ. ಬೇರೆ ದಿನವಾಗಿದ್ದರೆ ಬಹಳ ತೊಂದರೆಯಾಗುತ್ತಿತ್ತು. ಆದ್ದರಿಂದ, ತುಂಬಾ ಶಿಥಿಲಗೊಂಡಿರುವ ಮತ್ತು ಇಲಾಖೆಯ ಹೆಸರಿನಲ್ಲಿರುವ ಶಾಲಾ ಕಟ್ಟಡಗಳನ್ನು ಕೆಡವಲು ಅನುಮತಿಯನ್ನು ನೀಡಬೇಕೆಂದು ಕೋರಿದರು.

| | | | |
|---|---|---|---|
| | | **ವಯಸ್ಕರ ಶಿಕ್ಷಣ ಇಲಾಖೆ:**<br>ಜಿಲ್ಲಾ ವಯಸ್ಕರ ಶಿಕ್ಷಣಾಧಿಕಾರಿಯವರು ಮಾತನಾಡುತ್ತಾ, ಲಿಂಕ್ ಡಾಕ್ಯುಮೆಂಟಿನಲ್ಲಿ ನಿಗದಿಪಡಿಸಿರುವ ರೂ.10.00ಲಕ್ಷಗಳ ಅನುದಾನದಲ್ಲಿ ರೂ.7.50ಲಕ್ಷಗಳು ಬಿಡುಗಡೆಯಾಗಿದ್ದು, ಅನುದಾನದನ್ನು ವಿನಿಯೋಗಿಸಲಾಗುತ್ತಿದೆ ಮತ್ತು ನಂಜುಂಡಪ್ಪ ವರದಿ ಆಧಾರದ ಮೇಲೆ ಹಿಂದುಳಿದ ತಾಲ್ಲೂಕುಗಳಲ್ಲಿ ಅನಕ್ಷರಸ್ಥರಿಗೆ ಅಕ್ಷರ ಕಲಿಸುತ್ತಿರುವ 550 ಸ್ವಯಂಸೇವಕರಿಗೆ ಮಾಸಿಕವಾಗಿ ರೂ.300.00ಗಳಂತೆ ಗೌರವಧನವನ್ನು ನೀಡುವಂತೆ ಕೋರುತ್ತಿದ್ದಾರೆ. ಈ ಬಗ್ಗೆ ಕ್ರಮ ವಹಿಸಬೇಕೆಂದು ಕೋರಿದರು.<br>ಮುಂದುವರೆದು, ಗ್ರಾಮ ಪಂಚಾಯಿತಿಗಳಲ್ಲಿ ಶಿಕ್ಷಣ ಸೆಸ್ ವಸೂಲಿ ಮಾಡಿದಲ್ಲಿ ಅದನ್ನು ಅಕ್ಷರ ಕಲಿಸುತ್ತಿರುವವರಿಗೆ ಮಾಸಿಕ ಗೌರವಧನವನ್ನು ನೀಡುವಂತೆ ಸಭೆಯಲ್ಲಿ ನಿರ್ಣಯವನ್ನು ಮಾಡಬೇಕೆಂದು ಕೋರಿದರು.<br>**ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ:**<br>ಮಾನ್ಯ ಅಧ್ಯಕ್ಷರು ಮಾತನಾಡುತ್ತಾ, 13ನೇ ಹಣಕಾಸು, ವಿಶೇಷ ಅಭಿವೃದ್ಧಿ ಯೋಜನೆ/ ವಿಶೇಷ ಘಟಕ ಯೋಜನೆಗಳ ಕಾಮಗಾರಿಗಳನ್ನು ಎನ್ಟ್ರಸ್ಟ್ ಮೆಂಟ್ ಮಾಡಲು ಕ್ರಮ ವಹಿಸುವಂತೆ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಾಸನ ಮತ್ತು ಚನ್ನರಾಯಪಟ್ಟಣ ಇವರಿಗೆ ತಿಳಿಸಿದರು.<br>**ಆರೋಗ್ಯ ಇಲಾಖೆ:**<br>ಮಾನ್ಯ ಅಧ್ಯಕ್ಷರು ಮಾತನಾಡುತ್ತಾ, ತಾಲ್ಲೂಕು ಆಸ್ಪತ್ರೆಗಳಲ್ಲಿ ಫಾರ್ಮಾಸಿಸ್ಟ್ ಗಳನ್ನು ನೇಮಕ ಮಾಡಲು ಕ್ರಮ ವಹಿಸುವಂತೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಯವರಿಗೆ ತಿಳಿಸಿದರು.<br>ಮಾನ್ಯ ಸದಸ್ಯರಾದ ಶ್ರೀ ಎನ್.ಡಿ.ಕಿಶೋರ್ ರವರು ಮಾತನಾಡುತ್ತಾ, ಮಟ್ಟನವಿಲೆ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಉತ್ತಮ ವೈದ್ಯರಿದ್ದು, ಆಪರೇಷನ್ ಕೊಠಡಿ ನಿರ್ಮಿಸಿದಲ್ಲಿ ಸುತ್ತಮುತ್ತಲಿನ ಗ್ರಾಮೀಣ ಪ್ರದೇಶಗಳ ಜನರಿಗೆ ಬಹಳ ಅನುಕೂಲವಾಗುತ್ತದೆ ಈ ಬಗ್ಗೆ ಕ್ರಮ ವಹಿಸಬೇಕೆಂದು ಕೋರಿದರು.<br>ಮಾನ್ಯ ಸದಸ್ಯರಾದ ಶ್ರೀ ಲಕ್ಕ್ಮಣಗೌಡರವರು ಮಾತನಾಡುತ್ತಾ, ದುದ್ದ ಆಸ್ಪತ್ರೆಗೆ ವೈದ್ಯರನ್ನು ನೇಮಿಸಬೇಕೆಂದು ಕೋರಿದರು. | |
| 1 | ಜುಲೈ ಮತ್ತು ಆಗಸ್ಟ್ -2011ರ ವರೆಗಿನ ಮಾಹೆಯ ಮಾಸಿಕ ಲೆಕ್ಕ ಅನುಮೋದನೆಗೆ | ಟಿಪ್ಪಣಿ ಸಂಖ್ಯೆ: ಜಿಪಂಹಾ/ಆರ್ಥಿಕ/ ಸಂಕಲನ/ ಮಾಸಿಕ ಲೆಕ್ಕ/2011-12 ದಿನಾಂಕ: 21-12-2011ನ್ನು ಸಭೆಯಲ್ಲಿ ಮಂಡಿಸಲಾಯಿತು. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು. |

<table>
<tr>
<td></td>
<td></td>
<td>ಮುಖ್ಯ ಲೆಕ್ಕಾಧಿಕಾರಿಯವರು ಪ್ರಸ್ತಾಪಿಸುತ್ತಾ, ಜಿಲ್ಲಾ ಪಂಚಾಯಿತಿ ಹಾಸನದ ಜುಲೈ ಮತ್ತು ಆಗಸ್ಟ್ 2011ರವರೆಗಿನ ಮಾಹೆಯ ಜಮಾ ಮತ್ತು ಖರ್ಚಿನ ತ:ಖ್ತೆಗಳು ಚಲನ್ ಮತ್ತು ಓಚರ್ ಗಳು ಸ್ವೀಕೃತವಾಗಿರುತ್ತದೆ. ಖಜಾನೆಯಿಂದ ಸ್ವೀಕೃತವಾದ ಒಟ್ಟು ಜಮೆ ಮತ್ತು ಖರ್ಚಿನ ವಿವರಗಳನ್ನು ಪ್ರಧಾನ ಲೆಕ್ಕ ಶೀರ್ಷಿಕೆವಾರು ಸಂಕಲನ ಗಣಕೀಕರಣದಲ್ಲಿ ತಯಾರಿಸಲಾಗಿದೆ. ಸದರಿ ಸಂಕಲನದ ತ:ಖ್ತೆಯ ವಿವರ ರಾಜಸ್ವ ಜಮೆ ವೆಚ್ಚ ಮತ್ತು ಜಮಾ ಶೀರ್ಷಿಕೆಗಳ ಲೆಕ್ಕ, ಜಿಲ್ಲಾ ಪಂಚಾಯಿತಿಯ ಒಟ್ಟು ಜಮಾ ಮತ್ತು ಖರ್ಚಿನ ವಿವರ ಕೆಳಗಿನಂತಿದೆ. ಏಪ್ರಿಲ್, ಮೇ ಮತ್ತು ಜೂನ್ 2011ರವರೆಗಿನ ಮಾಸಿಕ ಲೆಕ್ಕ ವಿವರ ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ ಅನುಮೋದನೆ ನೀಡಲು ಮಂಡಿಸಿದೆ.
<table>
<tr><th>ತಿಂಗಳು</th><th>ಜಮೆ</th><th>ಖರ್ಚು</th></tr>
<tr><td>ಜುಲೈ</td><td>297799976</td><td>127187569</td></tr>
<tr><td>ಆಗಸ್ಟ್</td><td>92292091</td><td>144759139</td></tr>
</table>
</td>
<td>ಮುಖ್ಯ ಲೆಕ್ಕಾಧಿಕಾರಿಯವರು ಕೋರಿ ರುವಂತೆ ಜಿಲ್ಲಾ ಪಂಚಾಯಿತಿ ಹಾಸನದ ಜುಲೈ ಮತ್ತು ಆಗಸ್ಟ್ 2011ರ ಮಾಹೆ ವರೆಗಿನ ಜಮಾ ಮತ್ತು ಖರ್ಚಿನ ತ:ಖ್ತೆ ರಾಜಸ್ವ ಜಮೆ ವೆಚ್ಚಗಳಿಗೆ ಸಭೆಯು ಸರ್ವಾನು ಮತದಿಂದ ಅನುಮೋದನೆ ನೀಡಿತು.
<table>
<tr><th>ತಿಂಗಳು</th><th>ಜಮೆ</th><th>ಖರ್ಚು</th></tr>
<tr><td>ಜುಲೈ</td><td>297799976</td><td>127187569</td></tr>
<tr><td>ಆಗಸ್ಟ್</td><td>92292091</td><td>144759139</td></tr>
</table>
</td>
</tr>
<tr>
<td>2</td>
<td>ಜಿಲ್ಲಾ ಪಂಚಾಯತ್ ಹಾಸನಕ್ಕೆ 2011-12ನೇ ಸಾಲಿನ 3ನೇ ತ್ರೈಮಾಸಿಕ ಅನುದಾನ ಹಾಗೂ ಕೇಂದ್ರ / ಇತರೆ ಅನುದಾನ ಬಿಡುಗಡೆಯಾದ ಬಗ್ಗೆ.</td>
<td>ಟಿಪ್ಪಣಿ ಸಂಖ್ಯೆ: ಜಿಪಂಹಾ/ಆರ್ಥಿಕ/ಆವ್ಯ/ಅಧೀ-1/4/ಹಕಾಸ್ಥಾ/ಟಿಪ್ಪಣಿ/2011-12 ದಿನಾಂಕ: 23-12-2011ನ್ನು ಸಭೆಯಲ್ಲಿ ಮಂಡಿಸಲಾಯಿತು.<br>ಮುಖ್ಯ ಲೆಕ್ಕಾಧಿಕಾರಿಯವರು ಜಿಲ್ಲಾ ಪಂಚಾಯಿತಿ ಹಾಸನಕ್ಕೆ 2011-12ನೇ ಸಾಲಿನ 3ನೇ ತ್ರೈಮಾಸಿಕ ಅನುದಾನ ಹಾಗೂ ಕೇಂದ್ರ/ಇತರೆ ಅನುದಾನ ಬಿಡುಗಡೆಯಾಗಿರುವ ಬಗ್ಗೆ ಸಭೆಯ ಅವಗಾಹನೆಗೆ ಮಂಡಿಸಿದರು.</td>
<td>ಜಿಲ್ಲಾ ಪಂಚಾಯಿತಿ ಹಾಸನಕ್ಕೆ 2011-12ನೇ ಸಾಲಿನ 3ನೇ ತ್ರೈಮಾಸಿಕ ಅನುದಾನ ಹಾಗೂ ಕೇಂದ್ರ/ಇತರೆ ಅನುದಾನ ಬಿಡುಗಡೆಯಾಗಿರುವ ಬಗ್ಗೆ ಸಭೆಯು ಅವಗಾಹಿಸಿತು.</td>
</tr>
<tr>
<td>2</td>
<td>ಕುಮಾರಿ ಯಮುನ ಬಿ.ಜಿ. ರಾಷ್ಟ್ರಮಟ್ಟದ ಕ್ರೀಡಾಪಟು ಇವರಿಗೆ ಜಿಲ್ಲಾ ಪಂಚಾಯಿತಿಯಿಂದ ಕ್ರೀಡಾಪ್ರೋತ್ಸಾಹ ಧನ ನೀಡುವ ಕುರಿತು.</td>
<td>ಟಿಪ್ಪಣಿ ಸಂಖ್ಯೆ: ಜಿಪಂಹಾ/ಆ(8)/ವಂತಿಕೆ-151 /2011-12 ದಿನಾಂಕ: 29-10-2011ನ್ನು ಸಭೆಯಲ್ಲಿ ಮಂಡಿಸಲಾಯಿತು.<br>ಕುಮಾರಿ ಯಮುನ ಬಿ.ಜಿ ಬಿನ್ ಬಿ.ಎಂ. ಗುರಪ್ಪ, ರಾಜಘಟ್ಟ, ಹಾಸನ ಇವರು ಬಿ.ಎಸ್ಸಿ(ಕೃಷಿ) ಅಂತಿಮ ವರ್ಷದಲ್ಲಿ ವ್ಯಾಸಂಗ ಮಾಡುತ್ತಿದ್ದು, ಅಥ್ಲೇಟಿಕ್ಸ್ ಮತ್ತು ವಾಲಿಬಾಲ್ ಕ್ರೀಡೆಯಲ್ಲಿ ರಾಷ್ಟ್ರಮಟ್ಟದ ಸ್ಪರ್ಧೆಗಳಲ್ಲಿ ಭಾಗವಹಿಸಿ, ಉನ್ನತ ಸ್ಥಾನ ಪಡೆದು ಹಲವಾರು ಪ್ರಶಸ್ತಿಗಳನ್ನು ಪಡೆದಿದ್ದು, ಇವರು ಇನ್ನೂ ಹೆಚ್ಚಿನ ಕ್ರೀಡಾಸಕ್ತಿ ಹೊಂದುವ ಸಲುವಾಗಿ ಇವರನ್ನು ಗುರುತಿಸಿ ಧನಸಹಾಯವನ್ನು ನೀಡಿ ಪ್ರೋತ್ಸಾಹಿಸುವಂತೆ ಮಾನ್ಯ ಶ್ರೀ ಪಟೇಲ್ ಶಿವರಾಂ, ಮಾನ್ಯ ವಿಧಾನ ಪರಿಷತ್ ಸದಸ್ಯರು ಕೋರಿದ್ದು, ವಿಷಯವನ್ನು ಸಭೆಯ ನಿರ್ಣಯಕ್ಕೆ ಮಂಡಿಸಿದೆ.</td>
<td>ಸಭೆಯಲ್ಲಿ ವಿಷಯದ ಬಗ್ಗೆ ಸಮಗ್ರವಾಗಿ ಚರ್ಚಿಸಲಾಯಿತು.<br>ಶ್ರೀ ಪಟೇಲ್ ಶಿವರಾಂ, ಮಾನ್ಯ ವಿಧಾನ ಪರಿಷತ್ ಸದಸ್ಯರು ಇವರ ಕೋರಿಕೆಯಂತೆ ಕುಮಾರಿ ಯಮುನ ಬಿ.ಜಿ ಬಿನ್ ಬಿ.ಎಂ. ಗುರಪ್ಪ,</td>
</tr>
</table>

| | | | |
|---|---|---|---|
| | | | ರಾಜಘಟ್ಟ, ಹಾಸನ ಇವರ ಕ್ರೀಡಾಸಕ್ತಿಯನ್ನು ಪ್ರೋತ್ಸಾಹಿಸಲು ಜಿಲ್ಲಾ ಪಂಚಾಯಿತಿ ವತಿಯಿಂದ ರೂ.5000/- (ರೂಪಾಯಿ ಐದು ಸಾವಿರ ಮಾತ್ರ)ಗಳ ಧನಸಹಾಯವನ್ನು ನೀಡಲು ಸಭೆಯಲ್ಲಿ ನಿರ್ಣಯಿಸಲಾಯಿತು. |
| 3 | ಗ್ರಾಮಾಂತರ ಶಾಲೆಯ ಮಕ್ಕಳಿಗೆ ಜಿಲ್ಲಾ ಮಟ್ಟದ ಅಥ್ಲೆಟಿಕ್ಸ್ ಕ್ರೀಡಾಕೂಟ ನಡೆಸಲು ಆರ್ಥಿಕ ಸಹಾಯ ಕೋರಿ ಮನವಿ | ಟಿಪ್ಪಣಿ ಸಂಖ್ಯೆ: ಜಿಪಂಹಾ/ಆಡಳಿತ(8)ವಂತಿಕೆ/2011-12 ದಿನಾಂಕ: 13-12-2011ನ್ನು ಸಭೆಯಲ್ಲಿ ಮಂಡಿಸಲಾಯಿತು.<br>ಹಾಸನ ಜಿಲ್ಲಾ ಕ್ರೀಡಾ ಪರಿಷತ್, ಹಾಸನ ಇವರ ವತಿಯಿಂದ ದಿನಾಂಕ: 29-12-2011 ಮತ್ತು 30-12-2011ರಂದು ಎರಡು ದಿನಗಳು ಹಾಸನ ಜಿಲ್ಲಾ ಕ್ರೀಡಾಂಗಣದಲ್ಲಿ ಶಾಲಾ ಮಕ್ಕಳಿಗೆ ಹಾಗೂ ಕಾಲೇಜು ವಿದ್ಯಾರ್ಥಿಗಳಿಗೆ ಜಿಲ್ಲಾ ಮಟ್ಟದ ಅಥ್ಲೆಟಿಕ್ಸ್ ಕ್ರೀಡಾಕೂಟ ನಡೆಸಲಿದ್ದು, ಸದರಿ ಕ್ರೀಡಾಕೂಟಕ್ಕೆ ಬಹುಮಾನಗಳು ಹಾಗೂ ಇತರೆ ವೆಚ್ಚಗಳಿಗೆ ರೂ.50000/-ಗಳು ಖರ್ಚಾಗಲಿದ್ದು, ಸದರಿ ವೆಚ್ಚವನ್ನು ಭರಿಸಲು ಜಿಲ್ಲಾ ಪಂಚಾಯಿತಿಯಿಂದ ಧನಸಹಾಯ ನೀಡುವಂತೆ ಕೋರಿ ಅಧ್ಯಕ್ಷರು, ಜಿಲ್ಲಾ ಕ್ರೀಡಾ ಪರಿಷತ್, ಹಾಸನ ಇವರು ಮನವಿ ಸಲ್ಲಿಸಿದ್ದು, ವಿಷಯವನ್ನು ಸಭೆಯ ನಿರ್ಣಯಕ್ಕೆ ಮಂಡಿಸಿದೆ | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಅಧ್ಯಕ್ಷರು, ಜಿಲ್ಲಾ ಕ್ರೀಡಾ ಪರಿಷತ್, ಹಾಸನ ಇವರು ಕೋರಿರುವಂತೆ ದಿನಾಂಕ:29-12-2011 ಮತ್ತು 30-12-2011ರಂದು ನಡೆಯುವ ಜಿಲ್ಲಾ ಮಟ್ಟದ ಅಥ್ಲೆಟಿಕ್ಸ್ ಕ್ರೀಡಾಕೂಟಕ್ಕೆ ಜಿಲ್ಲಾ ಪಂಚಾಯಿತಿ ವತಿಯಿಂದ ರೂ.5000/- (ರೂಪಾಯಿ ಐದು ಸಾವಿರ ಮಾತ್ರ)ಗಳ ಧನ ಸಹಾಯವನ್ನು ನೀಡಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಿತು. |
| 4 | **ಅಧ್ಯಕ್ಷರ ಅಪ್ಪಣೆ ಮೇರೆಗೆ ಇತರೆ ವಿಷಯಗಳು** | | |
| 1 | ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ಕುವೆಂಪು ಮೂರ್ತಿಯನ್ನು ಸ್ಥಾಪಿಸಲು ಧನಸಹಾಯ ನೀಡುವ ಬಗ್ಗೆ. | ಮಾನ್ಯ ಅಧ್ಯಕ್ಷರು ಮಾತನಾಡುತ್ತಾ, ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ಕುವೆಂಪು ಮೂರ್ತಿಯನ್ನು ಕನ್ನಡ ಸಾಹಿತ್ಯ ಪರಿಷತ್ ಭವನದ ಆವರಣದಲ್ಲಿ ಸ್ಥಾಪಿಸಿದ್ದು, ಅದರ ವೆಚ್ಚ ಭರಿಸಲು ಜಿಲ್ಲಾ ಪಂಚಾಯಿತಿ ವತಿಯಿಂದ ಧನಸಹಾಯ ನೀಡುವಂತೆ ಮನವಿಯನ್ನು ಸಲ್ಲಿಸಿರುತ್ತಾರೆ. ಆದ್ದರಿಂದ, ಕುವೆಂಪು ಮೂರ್ತಿಯನ್ನು ಸ್ಥಾಪಿಸಲು ಜಿಲ್ಲಾ ಪಂಚಾಯಿತಿ ವತಿಯಿಂದ ರೂ.10000/-(ರೂಪಾಯಿ ಹತ್ತು ಸಾವಿರ ಮಾತ್ರ)ಗಳ ಧನಸಹಾಯವನ್ನು ನೀಡಲು ಸಭೆಯ ನಿರ್ಣಯಕ್ಕೆ ಮಂಡಿಸಿದರು. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಕನ್ನಡ ಸಾಹಿತ್ಯ ಪರಿಷತ್ ಭವನದ ಆವರಣದಲ್ಲಿ ಕುವೆಂಪು ಮೂರ್ತಿಯನ್ನು ಸ್ಥಾಪಿಸಿದ ವೆಚ್ಚ ಭರಿಸಲು ಜಿಲ್ಲಾ ಪಂಚಾಯಿತಿ ವತಿಯಿಂದ ರೂ.10000/- |

| | | | |
|---|---|---|---|
| | | | (ರೂಪಾಯಿ ಹತ್ತು ಸಾವಿರ ಮಾತ್ರ)ಗಳ ಧನಸಹಾಯವನ್ನು ನೀಡಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |
| 2 | ರಾಜ್ಯಮಟ್ಟದ ವಾಲಿಬಾಲ್ ಪಂದ್ಯಾವಳಿಗೆ ಧನಸಹಾಯ ನೀಡುವ ಬಗ್ಗೆ. | ಮಾನ್ಯ ಸದಸ್ಯರಾದ ಶ್ರೀ ಹುಚ್ಚೇಗೌಡರವರು ಮನವಿಯನ್ನು ಸಲ್ಲಿಸಿ ದಿ: 28-12-2011ರಿಂದ 30-12-2011ರವರೆಗೆ ಅರಸೀಕೆರೆ ತಾ: ಜಾವಗಲ್ ಹೋ: ಕರಗುಂದ ಗ್ರಾಮದಲ್ಲಿ ಹೆಚ್.ಡಿ.ದೇವೇಗೌಡ ಕಪ್ ರಾಜ್ಯ ಮಟ್ಟದ ವಾಲಿಬಾಲ್ ಪಂದ್ಯಾವಳಿಯನ್ನು ಏರ್ಪಡಿಸಲಾಗಿದ್ದು, ಸದರಿ ಪಂದ್ಯಾವಳಿಗೆ ಜಿಲ್ಲಾ ಪಂಚಾಯಿತಿಯಿಂದ ರೂ.10000/-ಗಳ ಧನಸಹಾಯವನ್ನು ನೀಡಬೇಕೆಂದು ಕೋರಿರುತ್ತಾರೆ. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಮಾನ್ಯ ಜಿಲ್ಲಾ ಪಂಚಾಯಿತಿ ಸದಸ್ಯರ ಕೋರಿರುವಂತೆ ದಿ: 28-12-2011ರಿಂದ 30-12-2011ರವರೆಗೆ ಅರಸೀಕೆರೆ ತಾ: ಜಾವಗಲ್ ಹೋ: ಕರಗುಂದ ಗ್ರಾಮದಲ್ಲಿ ನಡೆಯುವ ಹೆಚ್.ಡಿ.ದೇವೇಗೌಡ ಕಪ್ ರಾಜ್ಯ ಮಟ್ಟದ ವಾಲಿಬಾಲ್ ಪಂದ್ಯಾವಳಿಗೆ ಜಿಲ್ಲಾ ಪಂಚಾಯಿತಿಯಿಂದ ರೂ.10000/- (ರೂಪಾಯಿ ಹತ್ತು ಸಾವಿರ ಮಾತ್ರ)ಗಳ ಧನಸಹಾಯವನ್ನು ನೀಡಲು ಸಭೆಯಲ್ಲಿ ಸರ್ವಾನು ಮತದಿಂದ ನಿರ್ಣಯಿಸಲಾಯಿತು. |
| 3 | 2012-13ನೇ ಸಾಲಿನ ಕರಡು ವಾರ್ಷಿಕ ಯೋಜನೆಯನ್ನು ಸರ್ಕಾರಕ್ಕೆ ಸಲ್ಲಿಸಲು ಅನುಮೋದನೆ ನೀಡುವ ಬಗ್ಗೆ. | ಮುಖ್ಯ ಯೋಜನಾಧಿಕಾರಿಯವರು ಮಾತನಾಡುತ್ತಾ, 2012-13ನೇ ಸಾಲಿಗೆ ವಿವಿಧ ಇಲಾಖೆಗಳ ಬೇಡಿಕೆಗನುಗುಣವಾಗಿ ಪ್ರಾಥಮಿಕ ವಲಯಗಳಿಗೆ ಹೆಚ್ಚಿನ ಆದ್ಯತೆಯನ್ನು ನೀಡಿ ಒಟ್ಟು ರೂ.210.00 ಕೋಟಿಗಳಿಗೆ ಕರಡು ವಾರ್ಷಿಕ ಯೋಜನೆಯನ್ನು ತಯಾರಿಸಿದ್ದು, ಸದರಿ ಯೋಜನೆಯನ್ನು 04-01-2012ರಂದು ನಡೆಯುವ ಯೋಜನಾ ಕಾರ್ಯದರ್ಶಿಗಳ ಮಟ್ಟದ ಸಭೆಯಲ್ಲಿ ಮಂಡಿಸಲಾಗುವುದು. ತದನಂತರ ಕರ್ನಾಟಕ ಸರ್ಕಾರದ ಆಯವ್ಯಯದಲ್ಲಿ ಅನುಮೋದನೆಯಾದಂತೆ ಅನುದಾನವನ್ನು ಏಪ್ರಿಲ್ 1 ರಿಂದ ಅನ್ವಯವಾಗುವಂತೆ ಬಿಡುಗಡೆ ಮಾಡಲಾಗುವುದು ಎಂದು ಸಭೆಯ ಗಮನಕ್ಕೆ ತರುತ್ತಾ, ಕರಡು ವಾರ್ಷಿಕ ಕ್ರಿಯಾ ಯೋಜನೆಗೆ ಅನುಮೋದನೆ ನೀಡಬೇಕೆಂದು ಕೋರಿದರು. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>2012-13ನೇ ಸಾಲಿಗೆ ವಿವಿಧ ಇಲಾಖೆಗಳ ಬೇಡಿಕೆಗನುಗುಣವಾಗಿ ಪ್ರಾಥಮಿಕ ವಲಯ ಗಳಿಗೆ ಹೆಚ್ಚಿನ ಆದ್ಯತೆಯನ್ನು ನೀಡಿ ಸಿದ್ದಪಡಿಸಿರುವ ಒಟ್ಟು ರೂ.210.00 ಕೋಟಿಗಳ ಕರಡು ವಾರ್ಷಿಕ ಯೋಜನೆಗೆ ಅನುಮೋದನೆಯನ್ನು ನೀಡಲು ಸಭೆಯಲ್ಲಿ ಸರ್ವಾನು ಮತದಿಂದ ನಿರ್ಣಯಿಸಲಾಯಿತು. |

| | | | |
|---|---|---|---|
| 4 | ವಿಶ್ವ ವಿಕಲಚೇತನರ ದಿನಾಚರಣೆ ಆಚರಿಸಲು ಸಹಾಯಧನ ಕೋರಿ | ದಿನಾಂಕ: 03-12-2011ರಂದು ವಿಶ್ವ ವಿಕಲಚೇತನ ದಿನಾಚರಣೆಯನ್ನು ಆಚರಿಸಲಾಗುತ್ತಿದ್ದು, ಕಾರ್ಯಕ್ರಮದಲ್ಲಿ ಜಿಲ್ಲೆಯ ಜನಪ್ರತಿನಿಧಿಗಳು ಹಾಗೂ ಸುಮಾರು 500 ವಿಕಲಚೇತನರು ಭಾಗವಹಿಸುವವರಿದ್ದಾರೆ. ಹಾಗೆಯೇ ವಿಕಲಚೇತನರ ದಿನಾಚರಣೆ ಪ್ರಯುಕ್ತ ಜಿಲ್ಲೆಯ ವಿಕಲಚೇತನರು ಹಾಗೂ ವಿಶೇಷ ಶಾಲೆಯ ಮಕ್ಕಳಿಗೆ ಆಟೋಟ ಸ್ಪರ್ಧೆಗಳು ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ವಿಜೇತರಾದ ವಿಕಲಚೇತನ ಮಕ್ಕಳಿಗೆ ಬಹುಮಾನ ವಿತರಿಸಲು ಹಾಗೂ ಉಪಹಾರ/ಊಟದ ವೆಚ್ಚಕ್ಕೆ ಸುಮಾರು ರೂ.75000/-ಕ್ಕೂ ಅಧಿಕ ಅನುದಾನದ ಅವಶ್ಯಕತೆಯಿದ್ದು, ಜಿಲ್ಲಾ ಪಂಚಾಯಿತಿ ವತಿಯಿಂದ ಧನ ಸಹಾಯವನ್ನು ನೀಡುವಂತೆ ಜಿಲ್ಲಾ ವಿಕಲಚೇತನ ಮತ್ತು ಹಿರಿಯ ನಾಗರೀಕರ ಕಲ್ಯಾಣಾಧಿಕಾರಿಯವರು ತಮ್ಮ ಪತ್ರ ದಿನಾಂಕ: 21-11-2011ರಲ್ಲಿ ಕೋರಿರುತ್ತಾರೆ. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಜಿಲ್ಲಾ ವಿಕಲಚೇತನ ಮತ್ತು ಹಿರಿಯ ನಾಗರೀಕರ ಕಲ್ಯಾಣಾಧಿಕಾರಿಯವರು ಕೋರಿರುವಂತೆ ದಿನಾಂಕ: 03-12-2011ರಂದು ಆಚರಿಸಿರುವ ವಿಶ್ವ ವಿಕಲಚೇತನ ದಿನಾಚರಣೆ ಸಂಬಂಧ ಜಿಲ್ಲಾ ಪಂಚಾಯಿತಿ ವತಿಯಿಂದ ರೂ.5000/- (ರೂಪಾಯಿ ಐದು ಸಾವಿರ ಮಾತ್ರ)ಗಳ ಧನಸಹಾಯವನ್ನು ನೀಡಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |
| | ಮತ್ಯಾವುದೇ ವಿಷಯಗಳು ಚರ್ಚೆಗೆ ಬಾರದ ಹಿನ್ನಲೆಯಲ್ಲಿ ವಂದನಾರ್ಪಣೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು. | | |

B. R. Satyanarayana

(ಬಿ.ಆರ್.ಸತ್ಯನಾರಾಯಣ),

ಅಧ್ಯಕ್ಷರು,

ಜಿಲ್ಲಾ ಪಂಚಾಯಿತಿ, ಹಾಸನ.